# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮತ್ತಿಕೆರೆ ಉಪವಿಭಾಗದ ವಾರ್ಡ್ ಸಂಖ್ಯೆ:36 ಮತ್ತಿಕೆರೆ

ಕಛೇರಿಯಲ್ಲಿ ದಿನಾಂಕ: - -2021 ರಂದು ನಡೆದ ಮೀಟಿಂಗ್ ನಡವಳಿಗಳು

**ವಿಷಯ** : ಪಾಲಿಕೆ ಎಲ್ಲಾ ವಾರ್ಡ್‌ಗಳಲ್ಲಿ "Ward Decentralized Triage and Emergency Response (DETER) " Committee for Covid-19 Management (WDC) ರಚಿಸುವ ಕುರಿತು.

**ಉಲ್ಲೇಖ** : 1. ವಾರ್ಡ್ ಕಮಿಟಿ ನೋಡಲ್ ಅಧಿಕಾರಿಗಳನ್ನು ನೇಮಿಸಿರುವ ಕಛೇರಿ ಆದೇಶದ ಸಂಖ್ಯೆ ಬಿ12(5)ಪಿ.ಆರ್/35/20–21, ದಿನಾಂಕ : 16.04.2021

2. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ನಂ.RD 158 TNR 2020, ದಿನಾಂಕ :07–05–2021

3. ಈ ಕಛೇರಿಯ ಸಭಾ ಸೂಚನೆ ಪತ್ರದ ದಿನಾಂಕ :11–08–2021

---

ಉಲ್ಲೇಖ (1)ರ ಸಭಾ ಸೂಚನಾ ಪತ್ರದ ಅನುಸಾರ ಉಲ್ಲೇಖ (2) ರ ಆದೇಶದ ಅಂಶಗಳನ್ನು ಪರಿಶೀಲಿಸಲು ದಿನಾಂಕ:18-11-2021ರಂದು ಮತ್ತಿಕೆರೆ ವಾರ್ಡ್ ನಂ.36ರ ಕಾರ್ಯಾಲಯದಲ್ಲಿ ವಾರ್ಡ್ ಕಮಿಟಿ ಸಮಿತಿ ಸಭೆಯನ್ನು ಉಲ್ಲೇಖ ಪತ್ರ (3) ರಂತೆ ಬೆಳಗ್ಗೆ 11-30 ಗಂಟೆಗೆ ಕರೆಯಲಾಗಿದ್ದು, ಸದರಿ ಸಭೆಯ ನಡವಳಿಗಳು.

ಸದಸ್ಯರು ಕಾರ್ಯದರ್ಶಿಗಳು ಕಮಿಟಿ ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ಎಲ್ಲರನ್ನು ಸ್ವಾಗತಿಸಿದರು.

ಶ್ರೀ ಜೆ.ಬಿ. ಶ್ರೀಧರ್ ಮೂರ್ತಿ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ:36ರ ವಾರ್ಡ್ ಕಮಿಟಿ ರವರು ಮಾತನಾಡುತ್ತಾ, ಸಭೆಯನ್ನು ಪ್ರಾರಂಭಿಸಲಾಗಿತ್ತು, ಉಲ್ಲೇಖ (2) ರ ಆದೇಶವನ್ನು ವಿವರಿಸುತ್ತಾ ವಾರ್ಡ್ ನಂ.36ರಲ್ಲಿ "Ward Decentralized Triage and Emergency Response (DETER)" Committee for Covid-19 Management (WDC) ಯ ಸಮಿತಿ ರಚನೆ ವಾರ್ಡ್ ಮಟ್ಟದ ಕೋವಿಡ್ ನಿರ್ವಹಣೆ WDC (ವಾರ್ಡ್ ತಡೆ ಸಮಿತಿ) ವಿಕೇಂದ್ರೀಕೃತ ಚಿಕಿತ್ಸೆಯ ಸರದಿ ನಿರ್ಧಾರ ಮತ್ತು ತುರ್ತು ಪ್ರತಿಕ್ರಿಯೆ ಕೇಂದ್ರ ರಚನೆ, ಸ್ವರೂಪ, ಕಾರ್ಯವಿಧಾನ, ಅಗತ್ಯತೆ ಹಾಗೂ ಕೋವಿಡ್-19 ರ ನಿಯಂತ್ರಣ ಹಾಗೂ ಚಿಕಿತ್ಸೆ ಸಂಬಂಧ ತೆಗೆದುಕೊಳ್ಳಬೇಕಾದ ಕಾರ್ಯಗಳ ಬಗ್ಗೆ ಸಭೆಗೆ ವಿವರವಾಗಿ ತಿಳಿಸಿದರು.

1. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಕಂದಾಯ ಇಲಾಖೆ ರವರು ವಲಯ ಬದಲಾವಣೆಯಿಂದ ಕೆ.ಎಂ.ಸಿ ಕಾಯ್ದೆ 1976ರ ಆದೇಶದನ್ವಯ ಮರು ಮೌಲ್ಯಮಾಪಾನ-2016 ರಂತೆ ಕಟ್ಟಡದ ಮಾಲೀಕರುಗಳಿಂದ ಹೆಚ್ಚು ತೆರಿಗೆಯನ್ನು ವಸೂಲಾತಿ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿರುವ ವಾಣಿಜ್ಯ ಕಟ್ಟಡಗಳ ಬಗ್ಗೆ ಚರ್ಚಿಸಲಾಗಿ, ಅಧ್ಯಕ್ಷರು ಈ ಬಗ್ಗೆ ಮಾತನಾಡಿ ಮುಂದಿನ ಸಭೆಯಲ್ಲಿ ಇದಕ್ಕೆ ಸಂಬಂಧಿಸಿದ ವರದಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿರುತ್ತಾರೆ.

2. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಕಂದಾಯ ಇಲಾಖೆ ರವರಿಗೆ ವಾರ್ಡ್‌ಗಳ ವ್ಯಾಪ್ತಿಯಲ್ಲಿ ವಾಣಿಜ್ಯ ತೆರಿಗೆ ಪಾವತಿ ಮಾಡಿರುವ ಬಗ್ಗೆ ಅಧ್ಯಕ್ಷರು ವಿವರವಾದ ವರದಿಯನ್ನು ಕೋರಿದರು. ಹಾಗೂ ಸಹ ಕಂದಾಯ ಅಧಿಕಾರಿರವರು ಇದುವರೆವಿಗೂ ಯಾವುದೇ ಸಭೆಗೆ ಹಾಜರಾಗಿರದೇ ಇರುವುದರಿಂದ ಮುಂದಿನ ಸಭೆಗೆ ಹಾಜರಾಗುವಂತೆ ಸೂಚಿಸಿದರು.

ಪು.ತಿ.ನೋ

Scanned with CamScanner

3. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಅಶ್ವಿನಿ ಶಾಲೆ ಹತ್ತಿರ ಪಡ್ಡೆ ಹುಡುಗರ ಗುಂಪು ಸೇರುತ್ತಿದ್ದು, ಈ ಬಗ್ಗೆ ಪೊಲೀಸ್ ಇಲಾಖೆಯಿಂದ ಕ್ರಮ ಕೈಗೊಳ್ಳುವಂತೆ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

4. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಮತ್ತಿಕೆರೆ ಮೇಲ್ಸೇತುವೆ ಕೆಳಭಾಗದಲ್ಲಿ ಅನೈತಿಕ ಚಟುವಟಿಕೆಗಳು ನಡೆಯುತ್ತಿದ್ದು, ಈ ಬಗ್ಗೆ ಪೊಲೀಸ್ ಇಲಾಖೆಯಿಂದ ಕ್ರಮ ಕೈಗೊಳ್ಳುವಂತೆ ಅಧ್ಯಕ್ಷರು ಸಭೆಯಲ್ಲಿ ತಿಳಿಸಿರುತ್ತಾರೆ.

5. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿರುವ ವಸತಿ ಗೃಹಗಳಲ್ಲಿ ಮಧ್ಯ ರಾತ್ರಿಯಲ್ಲಿ ಹುಟ್ಟಿದ ಹಬ್ಬದ ಆಚರಣೆ ಹಾಗೂ ಹಾಗೂ ವಸತಿ ಗೃಹಕ್ಕೆ ತಡವಾಗಿ ಹೆಣ್ಣುಮಕ್ಕಳು ಬರುವುದು ಮಾಡುತ್ತಿದ್ದು, ಇದರಿಂದ ಅಕ್ಕಪಕ್ಕದ ನಿವಾಸಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಚರ್ಚಿಸಲಾಗಿ, ಅಧ್ಯಕ್ಷರು ಈ ಬಗ್ಗೆ ಮಾತನಾಡಿ ಪೊಲೀಸ್ ಇಲಾಖೆಯಿಂದ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತಿಳಿಸಿರುತ್ತಾರೆ.

6. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿರುವ ಹಣ್ಣು, ಸೊಪ್ಪು ಹಾಗೂ ತರಕಾರಿ ಮಾರಾಟ ಮಾಡುವವರು ಧ್ವನಿವರ್ಧಕಗಳನ್ನು ಅಳವಡಿಸಿಕೊಂಡು ವ್ಯಾಪಾರ ಮಾಡುತ್ತಿದ್ದು, ಇದರಿಂದ ಸ್ಥಳೀಯ ಮನೆಗಳಲ್ಲಿರುವ ಮಕ್ಕಳು ವಯೋವೃದ್ಧರು, ಆರೋಗ್ಯ ಸರಿಯಿಲ್ಲದೆ ಇರುವವರಿಗೆ ತೊಂದರೆ ಆಗುತ್ತಿರುವ ಬಗ್ಗೆ ಚರ್ಚಿಸಲಾಗಿ, ಅಧ್ಯಕ್ಷರು ಈ ಬಗ್ಗೆ ಮಾತನಾಡಿ ಪೊಲೀಸ್ ಇಲಾಖೆಯಿಂದ ಅಗತ್ಯ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತಿಳಿಸಿರುತ್ತಾರೆ

7. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯ ಆರೋಗ್ಯಾ ವೈದ್ಯಾಧಿಕಾರಿಗಳು ಮಾತನಾಡಿ ಈ ಕೆಳಕಂಡಂತೆ ಕೋವಿಡ್-19ರ ವರದಿಯನ್ನು ನೀಡಿರುತ್ತಾರೆ.

   H.I –

   AC – 02

   ಮತ್ತಿಕೆರೆ ವ್ಯಾಪ್ತಿಯಲ್ಲಿ ಸುಮಾರು ಶೇಕಡ 90 ಭಾಗದಷ್ಟು ಲಸಿಕೆಯನ್ನು ಹಾಕಲಾಗಿದ್ದು, ಉಳಿದಂತೆ ವಾರ್ಡ್ ವ್ಯಾಪ್ತಿಯಲ್ಲಿ ಸರ್ವೆ ಮಾಡಿ ಲಸಿಕೆ ನೀಡುವ ಕಾರ್ಯವನ್ನು ನಡೆಸಲಾಗುತ್ತಿದೆ. ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಸಂಜೆ 4-00ಗಂಟೆಗೆ ಯೋಗ ತರಗತಿಗಳನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದರು.

8. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಸೊಳ್ಳೆಗಳ ಹಾವಳಿ ಹೆಚ್ಚಾಗಿದ್ದು ಈ ಬಗ್ಗೆ ಆರೋಗ್ಯಾ ವೈದ್ಯಾಧಿಕಾರಿಗಳ ಇಲಾಖೆಯಿಂದ ಸೊಳ್ಳೆ ಔಷಧಿ ಸಿಂಪಡಣೆಯ ಬಗ್ಗೆ ಚರ್ಚಿಸಲಾಯಿತು.

9. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಮತ್ತೆ ಪ್ಲಾಸ್ಟಿಕ್ ಕವರ್‌ಗಳ ಬಳಕೆ ಹೆಚ್ಚಾಗಿದ್ದು, ಎಲ್ಲಾ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಕವರ್‌ಗಳನ್ನು ಸೀಸ್ ಮಾಡುವ ಬಗ್ಗೆ ಸಂಬಂಧಪಟ್ಟ ಆರೋಗ್ಯಾ ವೈದ್ಯಾಧಿಕಾರಿಗಳ ಇಲಾಖೆಯಿಂದ ಈ ಬಗ್ಗೆ ಕ್ರಮವಹಿಸಲು ಅಧ್ಯಕ್ಷರು ಸಭೆಯಲ್ಲಿ ತಿಳಿಸಿದರು.

10. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಮಾನ್ಯ ಹೈಕೋರ್ಟ್ ಆದೇಶದಂತೆ ಎ ಖಾತಾ ಹೊಂದಿರುವ ನಕ್ಷೆ ಮಂಜೂರಾತಿ ಪಡೆದು ನಕ್ಷೆ ಉಲ್ಲಂಘಿಸಿ ನಿರ್ಮಾಣ ಮಾಡಿರುವ ಕಟ್ಟಡಗಳಿಗೆ ಹಾಗೂ ಬಿ ಖಾತೆ ಹೊಂದಿರುವ ಕಟ್ಟಡಗಳಿಗೆ ಪಾಲಿಕೆಯ 313ರ ನೋಟಿಸ್ಸನ್ನು ಜಾರಿಮಾಡಲಾಗಿರುತ್ತದೆ ಎಂದು ಕಾಮಗಾರಿ ಇಲಾಖೆಯ ಅಧಿಕಾರಿಗಳು ಸಭೆಗೆ ತಿಳಿಸಿದರು.

ಮು.ತಿ.ನೋ



Scanned with CamScanner

11. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿರುವ ಗೋಲ್ಡನ್ ಅಪಾರ್ಟ್‌ಮೆಂಟ್ ಹತ್ತಿರ ಹಾಗೂ ವಿಶಾಲ್ ಮಾರ್ಟ್ ಹತ್ತಿರವಿರುವ ದೊಡ್ಡ ಮಳೆನೀರು ಚರಂಡಿಯ ಕಲ್ಲು ಮೇಲ್ಪದರವು ಒಡೆದು ಹೋಗಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಗಿ, ಈ ಬಗ್ಗೆ ಸಂಬಂಧಪಟ್ಟ ಇಲಾಖೆ ರವರು ಕ್ರಮ ಕೈಗೊಳ್ಳುವಂತೆ ಅಧ್ಯಕ್ಷರು ಸೂಚಿಸಿದರು.

12. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯ 3ನೇ ಮುಖ್ಯರಸ್ತೆಯಲ್ಲಿ ಪಾದಚಾರಿ ಮಾರ್ಗಗಳ ಒತ್ತುವರಿಯಾಗಿದ್ದು, ಇದನ್ನು ತೆರವುಗೊಳಿಸುವ ಕಾರ್ಯವನ್ನು ಸಂಬಂಧಪಟ್ಟ ಇಲಾಖೆಯಿಂದ ಕೈಗೊಳ್ಳುವಂತೆ ಅಧ್ಯಕ್ಷರು ತಿಳಿಸಿದರು.

13. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿರುವ ಜಯರಾಂ ಕಾಲೋನಿಯಲ್ಲಿರುವ ದೊಡ್ಡ ಮಳೆ ನೀರು ಚರಂಡಿಯಲ್ಲಿ ತುಂಬಿರುವ ಹೂಳನ್ನು ~~ತುಂಬಿರುವ~~ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಈ ಬಗ್ಗೆ ಅಗತ್ಯ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟ ಇಲಾಖೆಗೆ ಅಧ್ಯಕ್ಷರು ಸೂಚಿಸಿದರು.

14. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿರುವ ಮತ್ತಿಕೆರೆ 9ನೇ ಮುಖ್ಯರಸ್ತೆಯಲ್ಲಿ ಒಳಚರಂಡಿ ನೀರು ಸೋರಿಕೆಯಾಗುತ್ತಿದ್ದು, ಇದರಿಂದ ವಾಹನ ಸವಾರರು ಹಾಗೂ ಸಾರ್ವಜನಿಕರ ಓಡಾಟಕ್ಕೆ ತೊಂದರೆವುಂಟಾಗಿರುತ್ತದೆ. ಅದ್ದರಿಂದ ಕೂಡಲೇ ಇದನ್ನು ಸರಿಪಡಿಸುವಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಇಲಾಖೆ ಅಧಿಕಾರಿಗಳಿಗೆ, ಅಧ್ಯಕ್ಷರು ತಿಳಿಸಿದರು.

15. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿರುವ ಮರಗಳು ಎತ್ತರವಾಗಿ ಬೆಳೆದಿದ್ದು, ಇವುಗಳು ವಿದ್ಯುತ್ ಕಂಬಗಳಿಗೆ ಹಾಗೂ ರಸ್ತೆಗಳೆಲ್ಲಾ ಹರಡಿದ್ದು, ಇವುಗಳ ಭಾಗಗಳನ್ನು ಕತ್ತರಿಸುವಂತೆ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಅಧ್ಯಕ್ಷರು ಸೂಚಿಸಿದರು.

16. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಿಲೇವಾರಿಗೆ ಸಂಬಂಧಿಸಿದಂತೆ, ಪ್ರತಿದಿನ 5 ರಿಂದ 6 ಟನ್ ಕಸ ಸಂಗ್ರಹಣೆಯಾಗುತ್ತಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಶೇಕಡ 90ರಷ್ಟು ಜಿ.ಪಿ.ಎಸ್. ಅಳವಡಿಸಲಾಗಿದೆ. ಎಂದು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಸಭೆಗೆ ತಿಳಿಸಿದರು.

ಈ ಎಲ್ಲಾ ಕ್ರಮಗಳನ್ನು ತ್ವರಿತವಾಗಿ, ಆದ್ಯತೆ ಮೇಲೆ ಕೈಗೊಂಡು ಮುಂಬರುವ ಸಭೆಯಲ್ಲಿ ಮಂಡಿಸಲು ಸೂಚಿಸಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಂದನೆಗಳೊಂದಿಗೆ,

Sushma.M 18/11/21

(ಸುಷ್ಮಾ)

ಸದಸ್ಯ ಕಾರ್ಯದರ್ಶಿ,

ಹಾಗೂ ಸಹಾಯಕ ಅಭಿಯಂತರರು,

ವಾರ್ಡ್ ಸಂಖ್ಯೆ:36, ಮತ್ತಿಕೆರೆ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

(ಜೆ.ಬಿ.ಶ್ರೀಧರ್ ಮೂರ್ತಿ)).

ಅಧ್ಯಕ್ಷರು,

ವಾರ್ಡ್ ಸಂಖ್ಯೆ:36, ಮತ್ತಿಕೆರೆ.

Scanned with CamScanner